**<u>ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಜೇವರ್ಗಿ</u>**

**<u>OS No.61/2022</u>**

**ಸಾಕ್ಷಿಗೆ ದಿನಾಂಕ 26-11-2024 ರಂದು ಪ್ರಮಾಣ ವಚನ ಬೋಧಿಸಲಾಯಿತು**

| | | | |
|---|---|---|---|
| ಸಾಕ್ಷಿಯ ಹೆಸರು | ಃ | ಬಸ್ಸಪ್ಪಯ್ಯ | PW-1 |
| ತಂದೆ ಹೆಸರು | ಃ | ಅವ್ವಣ್ಣಗೌಡ ಮಾಲೀ ಬಿರಾದಾರ | |
| ವಯಸ್ಸು | ಃ | 24 ವರ್ಷ | |
| ಉದ್ಯೋಗ | ಃ | ಒಕ್ಕಲುತನ | |
| ವಾಸಸ್ಥಳ | ಃ | ಯಲಗೋಡ , ತಾಃ ಯಡ್ರಾಮಿ | |

**<u>ಮುಖ್ಯ ವಿಚಾರಣೆಃ ಶ್ರೀ ಕೆ.ಎಸ್.ಎಂ. ವಾದಿ ಪರ ವಕೀಲರಿಂದ</u>**

ಮುಖ್ಯ ವಿಚಾರಣೆ ಬದಲಾಗಿ ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆ ಬದಲಾಗಿ ಸಲ್ಲಿಸಿರುವ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ದಾವಾ ಸ್ವತ್ತಿಗೆ ಸಂಬಂಧಿಸಿದ ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 67 ಎಂದು ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂಧಿಸಿದ ಕೈಬರಹದ ಪಹಣಿ ಪತ್ರಿಕೆಯ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-68 ರಿಂದ 80 ಎಂದು ಗುರುತಿಸಲಾಯಿತು.

**<u>ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಮುಂದುವರೆದ ಮುಖ್ಯ ವಿಚಾರಣೆ ಮುಂದೂಡಲಾಯಿತು.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು, ಜೇವರ್ಗಿ